**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**
**ಸಿ.ಸಿ. 9/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.01**
**ದಿನಾಂಕಃ** 19.06.2025 **ಸಿಡಬ್ಲ್ಯೂ.02**

| | |
|---|---|
| ಹೆಸರು | ಪ್ರಕಾಶ ದಿವಾಟೆ |
| ತಂದೆ ಹೆಸರು | ಆನಂದಪ್ಪ ದಿವಾಟೆ |
| ವಯಸ್ಸು | 60 ವರ್ಷ |
| ಉದ್ಯೋಗ | ಅಕೌಂಟ್ ಕೆಲಸ |
| ವಾಸ ಸ್ಥಳ | ದಾವಣಗೆರೆ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ರವರ ಪರಿಚಯವಿದೆ. ಚಾಸಾ.3 ರವರ ಪರಿಚಯವಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಸ್ಥಳ ಪಂಚನಾಮೆಯಾಗಿದ್ದು ಅದನ್ನು ನಿಪಿ.1 ಎಂದು ಸಾಕ್ಷಿಯ ಸಹಿಯನ್ನು ನಿಪಿ.1 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದು ಕಚ್ಚಾ ನಕಾಶೆಯಾಗಿದ್ದು ಅದನ್ನು ನಿಪಿ.2 ಎಂದು ಸಾಕ್ಷಿಯ ಸಹಿಯನ್ನು ನಿಪಿ.2 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಆಗಸ್ಟ 2023 ರಂದು ದಾವಣರೆಗೆಯಿಂದ ಕೆಲಸ ಮುಗಿಸಿಕೊಂಡು ಹರಿಹರಕ್ಕೆ ಬರುತ್ತಿರುವಾಗ ಹರಿಹರದ ಕಡೆಗೆ ಇರುವ ಬೈಪಾಸ್ ಬ್ರಿಡ್ಜ ಹತ್ತಿರ ಮೊಬೈಲ್ ಕಳುವಾದ ವಿಚಾರಕ್ಕೆ ಸಹಿ ಮಾಡಿರುತ್ತೇನೆ. ಸದರಿ ಕಾಲಕ್ಕೆ ಛಾಯ ಚಿತ್ರ ತೆಗೆದಿರುತ್ತಾರೆ ಸಾಕ್ಷಿಯು ಗುರುತಿಸಿದ ಛಾಯ ಚಿತ್ರವನ್ನ ನಿಪಿ.3 ಮತ್ತು 4 ಎಂದು ಗುರುತಿಸಲಾಯಿತು. ಸದರಿ ಸಂದರ್ಭದಲ್ಲಿ ಸಂಜೆ 6.00 ಗಂಟೆಯಾಗಿತ್ತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಆರ್ ಜಿ ಬಿ ವಕೀಲರಿಂದಃ**

ನನ್ನನ್ನು ಠಾಣೆಗೆ ಕರೆಸಿ ಪ್ರಕರಣದ ಬಗ್ಗೆ ಮಾಹಿತಿ ತಿಳಿಸಿಲ್ಲ ಎಂದರೆ ಸರಿ. ಪಂಚನಾಮೆ ಜರುಗಿಸಿ ಪೊಲೀಸರು ನನಗೆ ನೋಟಿಸ್ ನೀಡಿಲ್ಲ. ನಾನು ಘಟನಾ ಸ್ಥಳಕ್ಕೆ ಬರುವ ಪೂರ್ವದಲ್ಲಿ ಪೊಲಿಸರು ಮತ್ತು ಚಾಸಾ.1 ಸ್ಥಳದಲ್ಲಿ ಇದ್ದರು ಎಂದರೆ ಸರಿ. ಸದರಿ ಸ್ಥಳದಲ್ಲಿ ನನ್ನ ಸ್ನೇಹಿತ ವೆಂಕಟೇಶ ಮತ್ತು ಕಾರ್ತಿಕ ಹಾಗೂ ಇನ್ನಿತರರು ಇದ್ದರು. ನಿಪಿ.1 ಮತ್ತು 2 ನ್ನು ನನ್ನ ಸಮಕ್ಷಮ ಬರೆದಿಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಖಾಲಿ ಹಾಳೆಗೆ ಸಹಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ